**All India Radio: Bangalore**
**Regional Bulletin In Kannada**
**19.09.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ಆರ್ಥಿಕ, ಸಾಮಾಜಿಕ ಸಮೀಕ್ಷೆ ಮುಂದೂಡಿಕೆ ಇಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ
2. ಜಾತಿ ಜನಗಣತಿ ವಿವಾದ; ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಅಸಮಾಧಾನ
3. ಬಾನು ಮುಷ್ತಾಕ್ ದಸರಾ ಉದ್ಘಾಟನೆ ವಿಚಾರ; ಸುಪ್ರೀಂಕೋರ್ಟ್ ತೀರ್ಪು ಸ್ವಾಗತಿಸಿದ ಸರ್ಕಾರ
4. ಬೆಂಗಳೂರಿನಲ್ಲಿ ಹಿರಿಯ ಪತ್ರಕರ್ತರಿಗೆ ೨೦೨೪ನೇ ಸಾಲಿನ ವಡ್ಡರ್ಸೆ ರಘುರಾಮ ಶೆಟ್ಟಿ ಪ್ರಶಸ್ತಿ ಪ್ರದಾನ
5. ವಿಜಯಪುರ ಬ್ಯಾಂಕ್ ದರೋಡೆ ಪ್ರಕರಣ; ಮಹಾರಾಷ್ಟ್ರದಲ್ಲಿ ೬.೫೪ ಕೆಜಿ ಚಿನ್ನ, ನಗದು ವಶ

<><><><>

ಹಿಂದುಳಿದ ವರ್ಗಗಳ ಆಯೋಗ ಶಾಸನಬದ್ಧ ಸಂಸ್ಥೆಯಾಗಿದ್ದು, ಯಾವುದೇ ನಿರ್ದೇಶನಗಳನ್ನು ನೀಡಲು ಸಾಧ್ಯವಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಸಮೀಕ್ಷೆಯ ಬಗ್ಗೆ ಅಭಿಪ್ರಾಯಗಳನ್ನು ಆಯೋಗಕ್ಕೆ ವಿವರಿಸಲಾಗಿದ್ದು, ಅಂತಿಮ ನಿರ್ಧಾರ ಆಯೋಗವೇ ಕೈಗೊಳ್ಳಲಿದೆ ಎಂದು ಹೇಳಿದ್ದಾರೆ. ಆರ್ಥಿಕ, ಸಾಮಾಜಿಕ ಸಮೀಕ್ಷೆಗೆ ಸಚಿವಸಂಪುಟದಲ್ಲಿ ವಿರೋಧ ವ್ಯಕ್ತವಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು ಬಿಜೆಪಿ ಈ ವಿಚಾರದಲ್ಲಿ ರಾಜಕೀಯ ಮಾಡುತ್ತಿದೆ ಎಂದು ದೂರಿದ್ದಾರೆ.

**ಧ್ವನಿ ****** ಮುಖ್ಯಮಂತ್ರಿ ಸಿದ್ದರಾಮಯ್ಯ (೨೫ ಸೆಕೆಂಡ್‌ಗಳು) ******

ಎಲ್ಲಾ ಗೊಂದಲ ಸರಿಪಡಿಸಿ ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ. ಕೆ ಶಿವಕುಮಾರ್ ತಿಳಿಸಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಅವರು ಕಾನೂನು ಚೌಕಟ್ಟಿನಲ್ಲಿ ಸಾಮಾಜಿಕ ನ್ಯಾಯ ಒದಗಿಸಲಾಗುವುದು ಎಂದು ಹೇಳಿದ್ದಾರೆ.

<><><><>

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ದುರಾಡಳಿತ, ಭ್ರಷ್ಟಾಚಾರದಲ್ಲಿ ಮುಳುಗಿದೆ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ರಾಜ್ಯದ ಅಭಿವೃದ್ಧಿಗೆ ಹಣವಿಲ್ಲ, ಪ್ರಗತಿ ಬಗ್ಗೆ ಯಾವುದೇ ದೂರದೃಷ್ಟಿ ಇಲ್ಲ. ಹೂಡಿಕೆದಾರರನ್ನು ಉದ್ಯಮಿಗಳನ್ನು ಹಿಡಿದಿಟ್ಟುಕೊಳ್ಳುವ ಆಸಕ್ತಿಯಂತೂ ಮೊದಲೇ ಇಲ್ಲ ಎಂದು ವ್ಯಂಗ್ಯವಾಡಿದ್ದಾರೆ. ರಾಜ್ಯ ಸರ್ಕಾರ ಮುಜುಗರಕ್ಕೆ ಒಳಗಾದಾಗಲೆಲ್ಲ ಜನರ ದಿಕ್ಕು ತಪ್ಪಿಸಲು ಜಾತಿ ಗಣತಿಯ ನಾಟಕವಾಡುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿಲುವನ್ನು ಸಚಿವರು, ಶಾಸಕರು ಒಪ್ಪುವುದಿಲ್ಲ. ಹೀಗಾಗಿ ಮುಖ್ಯಮಂತ್ರಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ರಾಜ್ಯವನ್ನು ಉಳಿಸಿ ಎಂದು ಆಗ್ರಹಿಸಿದ್ದಾರೆ.

<><><><>

ಮೈಸೂರು ದಸರಾ ಉದ್ಘಾಟನೆಗೆ ಬೂಕರ್ ಪ್ರಶಸ್ತಿ ವಿಜೇತ ಸಾಹಿತಿ ಬಾನು ಮುಷ್ತಾಕ್ ಅವರನ್ನು ಆಹ್ವಾನಿಸಿದ ರಾಜ್ಯ ಸರ್ಕಾರದ ನಿಲುವಿನ ವಿರುದ್ಧ ಸಲ್ಲಿಕೆಯಾಗಿದ್ದ ಅರ್ಜಿಯನ್ನು ವಜಾಗೊಳಿಸಿರುವ ಸರ್ವೋಚ್ಚ ನ್ಯಾಯಾಲಯದ ತೀರ್ಪನ್ನು ಸ್ವಾಗತಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು ಮೈಸೂರು ದಸರಾವನ್ನು ಧಾರ್ಮಿಕ ನೆಲೆಗಟ್ಟಿಗೆ ಸೀಮಿತವಾಗಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಸುಪ್ರೀಂ ತೀರ್ಪಿನಿಂದ ಸರ್ಕಾರದ ನಿಲುವಿಗೆ ಮನ್ನಣೆ ದೊರೆತಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ. ಮೈಸೂರು ದಸರಾ ಉದ್ಘಾಟನೆಗೆ ಬಾನು ಮುಷ್ತಾಕ್ ಆಹ್ವಾನಿಸಿರುವುದನ್ನು ಪ್ರಶ್ನಿಸಿ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂಕೋರ್ಟ್ ಇಂದು ವಜಾಗೊಳಿಸಿದೆ.

<><><><>

ಸುರಕ್ಷಿತ, ಸುಗಮ ಮತ್ತು ಸಾಂಪ್ರದಾಯಿಕ ದಸರಾ ಆಚರಣೆಗೆ ಮೈಸೂರು ನಗರ ಪೊಲೀಸರರಿಂದ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ, ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಹಾಗೂ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯಿಂದ ಅವಶ್ಯಕ ವ್ಯವಸ್ಥೆಗಳನ್ನು ಕೈಗೊಳ್ಳಲಾಗಿದೆ. ಇದೇ ೨೨ ರಿಂದ ೨೯ ರವರೆಗೆ ೧ನೇ ಹಂತ ಹಾಗೂ ಇದೇ ೩೦ ರಿಂದ ಅಕ್ಟೋಬರ್ ೨ರವರಗೆ ೨ನೇ ಹಂತದಲ್ಲಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮೈಸೂರು ನಗರ ಸೇರಿದಂತೆ ಹೊರ ಜಿಲ್ಲೆಗಳಿಂದ ೬ ಸಾವಿರದ ೧ಲಳ ಅಧಿಕಾರಿ ಮತ್ತು ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಅರಮನೆ

ಸುತ್ತಮುತ್ತ ರಸ್ತೆಗಳು ಹಾಗೂ ಇತರೇ ಪ್ರಮುಖ ರಸ್ತೆಗಳಲ್ಲಿ ಏಕ ಮುಖ ಸಂಚಾರ ವ್ಯವಸ್ಥೆ ಮಾಡಲಾಗಿದೆ. ಸದರಿ ರಸ್ತೆಗಳ ಬದಿಗಳಲ್ಲಿ ಪಾರ್ಕಿಂಗ್ ವ್ಯವಸ್ಥೆ ನಿಷೇಧಿಸಲಾಗಿದೆ.

<><><><>

ಪರಿಸರ ಅಭಿವೃದ್ಧಿ ಹಾಗೂ ಸಂರಕ್ಷಣೆಗೆ ಮಾಧ್ಯಮಗಳು ಹೆಚ್ಚು ಒತ್ತು ನೀಡಬೇಕು. ಪತ್ರಕರ್ತರು ಪರಿಸರ ನ್ಯಾಯಕ್ಕೆ ಬದ್ಧವಾಗಿರಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ೨೦೨೪ನೇ ಸಾಲಿನ ವಡ್ಡರ್ಸೆ ರಘುರಾಮ ಶೆಟ್ಟಿ ಸಾಮಾಜಿಕ ನ್ಯಾಯ ಪತ್ರಿಕೋದ್ಯಮ ಹಾಗೂ ೨೦೧೬ರಿಂದ ೨೩ನೇ ಸಾಲಿನ ಪರಿಸರ ಮತ್ತು ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು, ಪ್ರಶಸ್ತಿ ಪಡೆದ ಪತ್ರಕರ್ತರು ತಮ್ಮ ಕ್ಷೇತ್ರದಲ್ಲಿ ಇನ್ನಷ್ಟು ಸಾಧನೆ ಮಾಡುವಂತಾಗಲಿ ಎಂದು ಹಾರೈಸಿದರು. ಊಹೆಯೇ ಪತ್ರಿಕೋದ್ಯಮವಾಗಬಾರದು. ಹೀಗಾಗಿ ಊಹಾ ಪತ್ರಿಕೋದ್ಯಮಕ್ಕೆ ಕಡಿವಾಣ ಹಾಕಬೇಕಾಗಿದೆ ಎಂದು ಪತ್ರಕರ್ತರಿಗೆ ಕಿವಿಮಾತು ಹೇಳಿದರು.

<><><><>

ವಿಜಯಪುರ ಜಿಲ್ಲೆಯ ಚಡಚಣದಲ್ಲಿ ನಡೆದ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರು, ಮಹಾರಾಷ್ಟ್ರದ ಹಳ್ಳಿಯೊಂದರಲ್ಲಿ ೬.೫೪ ಕೆಜಿ ಚಿನ್ನ ಮತ್ತು ನಗದು ಇದ್ದ ಬ್ಯಾಗ್ ಅನ್ನು ವಶಪಡಿಸಿಕೊಂಡಿದ್ದಾರೆ. ವಿಜಯಪುರ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ್ ನಿಂಬರಗಿ ಮಾತನಾಡಿ, ಲೂಟಿ ಮಾಡಿದ ಚಿನ್ನ ಮತ್ತು ನಗದು ಇದ್ದ ಬ್ಯಾಗ್ ಅನ್ನು ನೆರೆಯ ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಹುಲಜಂತಿ ಗ್ರಾಮದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ. ಗ್ರಾಮದಲ್ಲಿನ ಶಿಥಿಲಗೊಂಡ ಕಟ್ಟಡದ ಮೇಲೆ ಬ್ಯಾಗ್ ಪತ್ತೆಯಾಗಿದೆ. "ಸೆಪ್ಟೆಂಬರ್ ೧೬ ರಂದು ನಡೆದ ಎಸ್‌ಬಿಐ ಬ್ಯಾಂಕ್ ದರೋಡೆ ಪ್ರಕರಣದ ತನಿಖೆಗಾಗಿ ಪೊಲೀಸ್ ಇಲಾಖೆ ಎಂಟು ತಂಡಗಳನ್ನು ರಚಿಸಿದೆ. ಮೂವರು ಶಸ್ತ್ರಸಜ್ಜಿತ ದರೋಡೆಕೋರರು ಬ್ಯಾಂಕ್ ಸಿಬ್ಬಂದಿ ಮತ್ತು ಸಾರ್ವಜನಿಕರನ್ನು ಬೆದರಿಸಿ ೧.೪ ಕೋಟಿ ರೂ. ನಗದು ಮತ್ತು ೨೦ ಕೆಜಿ ಚಿನ್ನದೊಂದಿಗೆ ಪರಾರಿಯಾಗಿದ್ದರು.

<><><><>

ಪ್ರಧಾನಿ ನರೇಂದ್ರ ಮೋದಿ ಬಾಲ್ಯದ ದಿನಗಳ ಚರಿತ್ರೆ ಆಧಾರಿತ 'ಚಲೋ ಜೀತೆ ಹೈ' ಕಿರು ಚಿತ್ರವನ್ನು ಇಂದು ಮೈಸೂರಿನ ಐನಾಕ್ಸ್ ನ ಮಲ್ಟಿಪ್ಲೆಕ್ಸ್‌ನಲ್ಲಿ ಮದ್ಯಾಹ್ನ ಪ್ರದರ್ಶಿಸಲಾಯಿತು. ಕಿರುಚಿತ್ರದ ಪ್ರದರ್ಶನದ ಮೊದಲ ದಿನವೇ ಸಾರ್ವಜನಿಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಮಾತನಾಡಿದ ಪ್ರೇಕ್ಷಕರೊಬ್ಬರು ಹೆಚ್ಚಿನ ಸಂಖ್ಯೆಯಲ್ಲಿ ಸಿನಿಮಾ ವೀಕ್ಷಿಸುವಂತೆ ತಿಳಿಸಿದ್ದಾರೆ.

**ಧ್ವನಿ ******: ದಿನೇಶ್**

<><><>

ಪ್ರಧಾನ ಮಂತ್ರಿ ಜೀವನ ಜ್ಯೋತಿ ವಿಮಾ ಹಾಗೂ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆಗಳ ನೋಂದಣಿಯನ್ನು ಹೆಚ್ಚಿಸುವ ಬಗ್ಗೆ ದಕ್ಷಿಣ ಕನ್ನಡ ಜಿಲ್ಲೆಯ ಬ್ಯಾಂಕ್‌ಗಳು ಗಮನ ಹರಿಸಬೇಕು ಎಂದು ಜಿಲ್ಲಾಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನರ್ವಾಡೆ ವಿನಾಯಕ್ ಕಾರ್ಬಾರಿ ಕರೆ ನೀಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ಜಿಲ್ಲಾ ಮಟ್ಟದ ಲೀಡ್ ಬ್ಯಾಂಕ್‌ಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಅಭಿಯಾನ ನಡೆಸುವ ಮೂಲಕ ಗ್ರಾಮೀಣ ಪ್ರದೇಶಗಳತ್ತ ಗಮನಹರಿಸಲಾಗಿದೆ. ನಗರ ಪ್ರದೇಶಗಳಲ್ಲಿ ಬ್ಯಾಂಕುಗಳು ಹೆಚ್ಚಿನ ಶಾಖೆಗಳನ್ನು ಹೊಂದಿರುವುದರಿಂದ, ಬ್ಯಾಂಕರ್‌ಗಳು ನಗರ ಪ್ರದೇಶಗಳತ್ತಲೂ ಗಮನಹರಿಸಬೇಕು ಎಂದು ಸಲಹೆ ನೀಡಿದ್ದಾರೆ. ಸಾರ್ವಜನಿಕರ ಹಿತದೃಷ್ಟಿಯಿಂದ ಜಾರಿಗೊಳಿಸಿರುವ ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ಭಾರತೀಯ ಸ್ಟೇಟ್ ಬ್ಯಾಂಕಿನ ಗದಗ ಜಿಲ್ಲೆಯ ಅಗ್ರಣೀಯ ಶಾಖೆ ವ್ಯವಸ್ಥಾಪಕರಾದ ಪ್ರಶಾಂತ ಎಂ. ವಿ. ತಿಳಿಸಿದ್ದಾರೆ. ಗದಗ ಜಿಲ್ಲೆಯ ೧೨೨ ಗ್ರಾಮ ಪಂಚಾಯತ್ ವ್ಯಾಪ್ತಿಯ ೩೨೫ ಗ್ರಾಮಗಳ ಪೈಕಿ ೯೭ ಗ್ರಾಮ ಪಂಚಾಯತ್ ವ್ಯಾಪ್ತಿಯ ಗ್ರಾಮಗಳಲ್ಲಿ ಕೇಂದ್ರ ಸರ್ಕಾರ ಜಾರಿಗೊಳಿಸಿದ ಹಲವಾರು ಯೋಜನೆಗಳ ಆರ್ಥಿಕ ಪರಿಪೂರ್ಣತಾ ಅಭಿಯಾನ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><><>

ವಿಜಯಪುರ ಜಿಲ್ಲೆಯಲ್ಲಿ ಒತ್ತುವರಿಯಾದ ಸ್ಮಶಾನ ಭೂಮಿಗಳನ್ನು ತೆರವುಗೊಳಿಸಿ ಸಂರಕ್ಷಣೆಗೆ ಅಗತ್ಯ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಡಾ.ಆನಂದ ಕೆ. ಸೂಚನೆ ನೀಡಿದ್ದಾರೆ. ವಿಜಯಪುರದಲ್ಲಿ ನಡೆದ ದೌರ್ಜನ್ಯ ನಿಯಂತ್ರಣ ಪ್ರತಿಬಂಧ ಕಾಯ್ದೆಯಡಿ ರಚಿತವಾದ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಒತ್ತುವರಿಯಾಗಿರುವ ಸ್ಮಶಾನ ಭೂಮಿಗಳನ್ನು ತೆರವುಗೊಳಿಸುವುದು ಸಂಬಂಧಿಸಿದ ಇಲಾಖೆಗಳ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ.

<><><>

ಕೊಳಚೆ ಪ್ರದೇಶಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವುದು ಕಂಡುಬಂದಲ್ಲಿ ಕಾನೂನು ರೀತಿ ಕ್ರಮ ಕೈಗೊಳ್ಳುವಂತೆ ಮಂಡ್ಯ ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಆಯೋಜಿಸಲಾಗಿದ್ದ ಅಧಿಕಾರಿಗಳ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಾಳಪ್ಪ ಬಡಾವಣೆಯಲ್ಲಿ ನಿವೇಶನ ನೀಡಲು ಯಾವುದೇ ಖಾಲಿ ನಿವೇಶನ ಇಲ್ಲ. ಆದ್ದರಿಂದ ಮಂಡ್ಯ ನಗರದ ಸುತ್ತಲಿನ ೧೦ ಕಿಲೋ ಮೀಟರ್ ವ್ಯಾಪ್ತಿಯಲ್ಲಿ ಸೂಕ್ತ ಸ್ಥಳ ಗುರುತಿಸುವಂತೆ ಸೂಚಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>